# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ಹೆಣ್ಣುಮಕ್ಕಳಿಗೆ / ವಿಚ್ಛೇದಿತ ಮಹಿಳೆಯರಿಗೆ ಮತ್ತು ವಿಧವೆಯರಿಗೆ ವೈಯಕ್ತಿಕ ಹಾಗೂ ಸಾಮೂಹಿಕ ಮದುವೆ ಕಾರ್ಯಗಳಿಗೆ ಸಹಾಯಧನ ಒದಗಿಸುವ ಕುರಿತು **"ಬಿದಾಯಿ"** ಎಂಬ ನೂತನ ಯೋಜನೆ.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ : MWD 78 WES 2013, ಬೆಂಗಳೂರು ದಿನಾಂಕ: 04-09-2013.

2) ದಿನಾಂಕ : 13-11-2013ರಲ್ಲಿ ಅನುಮೋದನೆಗೊಂಡ ಪರಿಷ್ಕೃತ ಟಿಪ್ಪಣಿ.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತರ ಮುಸ್ಲಿಂ ಕುಟುಂಬದ ವಿಧವೆಯರು ವಿಚ್ಛೇದಿತ ಮಹಿಳೆಯರು ಮತ್ತು ವಯಸ್ಸಿಗೆ ಬಂದ ಹೆಣ್ಣು ಮಕ್ಕಳಿಗೆ ಮದುವೆ ಕಾರ್ಯ ನೆರವೇರಿಸಲು ಸಹಾಯಧನ ನೀಡಲಾಗಿರುತ್ತದೆ. ಈ ಯೋಜನೆಗೆ **"ಬಿದಾಯಿ"** ಎಂಬುದಾಗಿ ಹೆಸರಿಸಲು, ಈ ಯೋಜನೆಯ ಸವಲತ್ತನ್ನು ರಾಜ್ಯದ ಎಲ್ಲಾ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರೈಸ್ತ, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಹೆಣ್ಣುಮಕ್ಕಳು, ವಿಧವೆಯರು ಮತ್ತು ವಿಚ್ಛೇದಿತ ಮಹಿಳೆಯರಿಗೆ ಸಹಾಯಧನವನ್ನು ನಗದು ರೂಪದಲ್ಲಿ ಮಾತ್ರ ವಧುವಿನ ಬ್ಯಾಂಕು ಖಾತೆಗೆ ಆನ್‌ಲೈನ್ ಮುಖಾಂತರ ವರ್ಗಾಯಿಸಲು ಹಾಗೂ ಮಂಜೂರಾತಿ ನೀಡುವಾಗ ಗುರಿಗೆ ತಕ್ಕಂತೆ ಮತ್ತು ಅನುದಾನದ ಅನುಗುಣವಾಗಿ ಅತೀ ಕಡಿಮೆ ಆದಾಯವಿರುವ ಅರ್ಹ ಫಲಾನುಭವಿಗಳ ಪೈಕಿ ವಿಧವೆ ತಾಯಿಯ ಕುಟುಂಬ/ವಿಕಲಚೇತನ ಕುಟುಂಬದವರಿಗೆ, ವಿಧವೆ ಮತ್ತು ವಿಚ್ಛೇದಿತ ಮಹಿಳೆಯರಿಗೆ ಮೊದಲ ಆದ್ಯತೆ ಮೇರೆಗೆ ಸಹಾಯಧನ ಮಂಜೂರು ಮಾಡಬೇಕೆಂಬುದಾಗಿ ಷರತ್ತುಗಳನ್ನು ಮಾರ್ಪಡಿಸಲು ಓದಲಾದ (2) ರಲ್ಲಿ ಆದೇಶಿಸಲಾಗಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಪರಿಷ್ಕೃತ ಆದೇಶ.

<u>ಸರ್ಕಾರಿ ಆದೇಶ ಸಂಖ್ಯೆ : MWD 533 MDS 2013, ಬೆಂಗಳೂರು, ದಿನಾಂಕ: 13-11-2013</u>

ಮೇಲೆ ಓದಲಾಗಿರುವ (1) ನೇ ಸರ್ಕಾರಿ ಆದೇಶವನ್ನು ಹಿಂಪಡೆದು ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವಂತೆ ರಾಜ್ಯದ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರೈಸ್ತ, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಹೆಣ್ಣುಮಕ್ಕಳು, ವಿಧವೆಯರು ಮತ್ತು ವಿಚ್ಛೇದಿತ ಮಹಿಳೆಯರಿಗೆ ಮದುವೆಯ ನಿಮಿತ್ತ ವಿವಾಹ ಖರ್ಚು ವೆಚ್ಚಗಳು, ಅಗತ್ಯವಿರುವ ಜೀವನಾವಶ್ಯಕ ಸಾಮಗ್ರಿಗಳನ್ನು ಖರೀದಿಸಲು ಸಹಾಯಧನ ಮಂಜೂರಾತಿ ನೀಡಲು ಹಾಗೂ ಈ ಯೋಜನೆಗೆ "ಬಿದಾಯಿ" ಎಂಬುದಾಗಿ ಹೆಸರಿಸಿ ಈ ಕೆಳಕಂಡ ಷರತ್ತುಗಳೊಂದಿಗೆ ಪರಿಷ್ಕೃತ ಆದೇಶ ಹೊರಡಿಸಲಾಗಿದೆ.

1. ಈ ಯೋಜನೆಯಡಿಯಲ್ಲಿ ಧನಸಹಾಯ ಪಡೆಯುವ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ `1,50,000/- ಗಳಿಗಿಂತ ಕಡಿಮೆ ಇರತಕ್ಕದ್ದು.
2. ಈ ಸೌಲಭ್ಯ ಜೀವನದಲ್ಲಿ ಒಮ್ಮೆ ಮಾತ್ರ ಪಡೆಯಬಹುದಾಗಿದೆ.
3. ಈ ಸೌಲಭ್ಯ ಪಡೆಯುವ ವಧುವಿಗೆ ಮದುವೆಯ ದಿನಾಂಕಕ್ಕೆ ಕನಿಷ್ಟ 18 ವರ್ಷ ವಯಸ್ಸು ಹಾಗೂ ವರನಿಗೆ 21 ವರ್ಷ ವಯಸ್ಸು ಆಗಿರತಕ್ಕದ್ದು.
4. ಈ ಯೋಜನೆಯ ಸೌಲಭ್ಯವು ರಾಜ್ಯದ ನಿವಾಸಿಗಳಿಗೆ ಮಾತ್ರ ಅನ್ವಯಿಸುತ್ತದೆ.
5. ವರನಿಗೆ ಜೀವಂತ ಹೆಂಡತಿ ಇದ್ದಲ್ಲಿ, ಈ ಯೋಜನೆಯ ಸೌಲಭ್ಯ ಅನ್ವಯಿಸುವುದಿಲ್ಲ.

6. ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಈ ಯೋಜನೆಯಡಿ ಸೌಲಭ್ಯ ನೀಡತಕ್ಕದ್ದು.

7. ಮದುವೆ ನಿಶ್ಚಯವಾಗಿರುವ ಬಗ್ಗೆ ಲಗ್ನಪತ್ರಿಕೆ (ಮಾಡಿಸಿದ್ದಲ್ಲಿ) ಮತ್ತು ಇತರೆ ದಾಖಲಾತಿಗಳೊಂದಿಗೆ ಪ್ರಸ್ತಾವನೆ ಪಡೆದು ಫಲಾನುಭವಿಯ ಮದುವೆಯ ದಿನಾಂಕದಂದು ` 50,000/- ಗಳ ನಗದು ಸಹಾಯಧನವನ್ನು ವಧುವಿನ ಹೆಸರಿಗಿರುವ ಬ್ಯಾಂಕು ಖಾತೆಗೆ ಆನ್‌ಲೈನ್ ಮುಖಾಂತರ ವರ್ಗಾಯಿಸುವುದು.

8. ಮದುವೆಯಾದ ನಂತರ ವಧು-ವರನ ಭಾವಚಿತ್ರ, ಧಾರ್ಮಿಕ ಸಂಸ್ಥೆ ನೀಡಿರುವ ಮದುವೆ ಪ್ರಮಾಣ ಪತ್ರ ಅಥವಾ ಉಪ ನೋಂದಣಾಧಿಕಾರಿಗಳು ನೀಡಿರುವ ಮದುವೆ ನೋಂದಣಿ ಪತ್ರ ಪಡೆಯುವುದು.

9. ಮೇಲಿನ ಷರತ್ತಿನಲ್ಲಿರುವ ದಾಖಲಾತಿಗಳನ್ನು ಮದುವೆಯ ತರುವಾಯ ನೀಡಲಾಗುವುದೆಂದು ಪೂರ್ವಭಾವಿಯಾಗಿ ಘೋಷಣಾ ಪತ್ರವನ್ನು ಪಡೆಯತಕ್ಕದ್ದು.

10. ಈ ಯೋಜನೆಯ ಲಾಭ ವೈಯಕ್ತಿಕ ಅಥವಾ ಸಾಮೂಹಿಕವಾಗಿ ನೆರವೇರಿಸಲಾಗುವ ವಿವಾಹಗಳಿಗೂ ಅನ್ವಯಿಸುವುದು.

11. ಸ್ಥಳೀಯ ಸರ್ಕಾರೇತರ ಸಂಸ್ಥೆಗಳು ಈ ಯೋಜನೆಯಡಿಯಲ್ಲಿ ನಿಗಧಿಪಡಿಸಲಾಗಿರುವ ದಾಖಲಾತಿಗಳನ್ನು ನೀಡಿ ಅರ್ಹ ಫಲಾನುಭವಿಗಳಿಗೆ ನೀಡಲಾಗುವ ಸಹಾಯಧನದೊಂದಿಗೆ ಇತರೆ ಸೌಲಭ್ಯಗಳನ್ನು ಒದಗಿಸಬಹುದಾಗಿರುತ್ತದೆ.

12. ಅರ್ಜಿದಾರರು ಸಹಾಯಧನ ಮಂಜೂರಾತಿಗೆ ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಯು ನಿಗಧಿತ ಅರ್ಜಿ ನಮೂನೆ ಹಾಗೂ ಅಗತ್ಯ ದಾಖಲಾತಿಗಳು ಮದುವೆ ನಡೆಯುವ ದಿನಾಂಕದಿಂದ ಒಂದು ತಿಂಗಳ ಮುಂಚೆ ಸಲ್ಲಿಸತಕ್ಕದ್ದು.

13. ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವರು ಪರಿಶೀಲನೆಯ ನಂತರ ಜಿಲ್ಲೆಗೆ ನಿಗಧಿಪಡಿಸಲಾಗಿರುವ ಗುರಿಗೆ ತಕ್ಕಂತೆ ಹಾಗೂ ಅತೀ ಕಡಿಮೆ ಆದಾಯವಿರುವ ಅರ್ಹ ಫಲಾನುಭವಿಗಳ ಪೈಕಿ, ವಿಧವೆ ತಾಯಿಯ ಕುಟುಂಬ/ವಿಕಲಚೇತನ ಕುಟುಂಬದವರಿಗೆ, ವಿಧವೆ ಮತ್ತು ವಿಚ್ಛೇದಿತ ಮಹಿಳೆಯರಿಗೆ ಮೊದಲ ಆದ್ಯತೆ ಮೇರೆಗೆ ಸಹಾಯಧನ ಮಂಜೂರಾತಿ ನೀಡತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು 2225-03-800-0-07-059-ಇತರೆ ಖರ್ಚುಗಳು ಶೀರ್ಷಿಕೆಯಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ/617/ವೆಚ್ಚ-3/13 ದಿನಾಂಕ: 31-08-2013ರಂದು ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಬ್ಬಾಸ್ ಷರೀಫ್)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.

ಪು.ತಿ.ನೋ.